**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ ಸಂಖ್ಯೆ:080-22343980

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು, ದಿನಾಂಕ:25.11.2017

ಸಂಖ್ಯೆ:ಕಾಶಿಇ/ಶೈವಿ/47/ಸುತ್ತೋಲೆ/2016-17

# ಸುತ್ತೋಲೆ

**ವಿಷಯ:** ನವೆಂಬರ್ 26-11-2017 ನ್ನು ರಾಜ್ಯಾದ್ಯಂತ "ಸಂವಿಧಾನದ ದಿನ"ವನ್ನಾಗಿ ಆಚರಿಸುವ ಬಗ್ಗೆ.

**ಉಲ್ಲೇಖ:** ಕರ್ನಾಟಕ ಸರ್ಕಾರದ ಸಚಿವಾಲಯ, ವಿಧಾನಸೌಧ,ಬೆಂಗಳೂರು ಇವರ ಪತ್ರ ಸಂಖ್ಯೆ: ಸಿಆಸುಇ/5/ರಾಐಸ/2017,ದಿನಾಂಕ:20-11-2017

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪ್ರತಿ ವರ್ಷ ನವೆಂಬರ್ 26 ರಂದು **"ಸಂವಿಧಾನ ದಿನ"** ವನ್ನು ಆಚರಿಸಲಾಗುತ್ತಿದ್ದು, ಈ ವರ್ಷವೂ ನವೆಂಬರ್ 27-11-2017 ರಂದು **"ಸಂವಿಧಾನ ದಿನ"**ವನ್ನು ಆಚರಿಸಲು ಕ್ರಮಕೈಗೊಳ್ಳಲು ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ಸೂಚಿಸಲಾಗಿರುತ್ತದೆ.

ಈ ಸಂಬಂಧ, ಇಲಾಖಾ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ / ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ನವೆಂಬರ್ 27-11-2017 ರಂದು "ಸಂವಿಧಾನ ದಿನ" ವನ್ನಾಗಿ ಆಚರಿಸಲು ಕ್ರಮ ಕೈಗೊಂಡು ಈ ಸುತ್ತೋಲೆಯೊಂದಿಗೆ ಲಗತ್ತಿಸಿರುವ ಸಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯ: ವಿಚಾರ ಅಭಿವ್ಯಕ್ತಿ,ವಿಶ್ವಾಸ, ಧರ್ಮಶ್ರದ್ಧೆ ಮತ್ತು ಉಪಾಸನಾ ಸ್ವಾತಂತ್ರ್ಯ ಸ್ಥಾನಮಾನ ಹಾಗೂ ಅವಕಾಶ ಸಮಾನತೆ ಬಗ್ಗೆ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಕ್ರಮಕೈಗೊಳ್ಳುವಂತೆ ಪ್ರಾಂಶುಪಾಲರಿಗೆ ಸೂಚಿಸಲಾಗಿದೆ.

**ಕಾಲೇಜು ಶಿಕ್ಷಣ ನಿರ್ದೇಶಕರು.**

**ಇವರಿಗೆ:**

1) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ -ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಗೆ ರವಾನಿಸಲು ಸೂಚಿಸಲಾಗಿದೆ.
2) ರಾಜ್ಯದ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಗೆ(ಪ್ರಾದೇಶಿಕ ಜಂಟಿ ನಿರ್ದೇಶಕರ ಮುಖಾಂತರ) ಅಗತ್ಯ ಕ್ರಮಕ್ಕಾಗಿ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,ಬೆಂಗಳೂರುಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು
4) ಕಛೇರಿ ಪ್ರತಿ.

**ಪ್ರತಿಯನ್ನು:**

1. ಸರ್ಕಾರದ ಅಧೀನ ಕಾರ್ಯದರ್ಶಿ ಸಿಆಸುಇ (ರಾಜಕೀಯ), ಕರ್ನಾಟಕ ಸರ್ಕಾರ ಸಚಿವಾಲಯ, ವಿಧಾನಸೌಧ, ಬೆಂಗಳೂರು
2. ಕಛೇರಿ ಪ್ರತಿ.

Mailbox / Academic
24-11-17

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 5 ರಾಐಸ 2017

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 20-11-2017.

1161
25/11/2017

*ಇವರಿಂದ:*

ಸರ್ಕಾರದ ಕಾರ್ಯದರ್ಶಿಗಳು,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
ವಿಧಾನ ಸೌಧ, ಬೆಂಗಳೂರು.

*ಇವರಿಗೆ:*

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು.
2. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
3. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ, ವಿಧಾನಸೌಧ, ಬೆಂಗಳೂರು.
4. ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
5. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು
6. ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
7. ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
8. ಎಲ್ಲಾ ಜಿಲ್ಲಾಧಿಕಾರಿಗಳು,
9. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
10. ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.

ಮಾನ್ಯರೇ,

ವಿಷಯ: ದಿನಾಂಕ 26-11-2017 ರಂದು ರಾಜ್ಯಾದ್ಯಂತ **"ಸಂವಿಧಾನ ದಿನ"** ವನ್ನು ಆಚರಿಸುವ ಬಗ್ಗೆ.

ಉಲ್ಲೇಖ: ಕಾರ್ಯದರ್ಶಿ, ಸಾಮಾಜಿಕ ನ್ಯಾಯ ಮತ್ತು ಅಧಿಕಾರ ಮಂತ್ರಾಲಯ, ಭಾರತ ಸರ್ಕಾರ, ಇವರ ದಿನಾಂಕ 27-10-2017 & 14-11-2017 ರ ಪತ್ರ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಪತ್ರದಲ್ಲಿ ಪ್ರತಿವರ್ಷ ನವೆಂಬರ್ 26, ರಂದು "ಸಂವಿಧಾನ ದಿನ"ವನ್ನು ಆಚರಿಸಲಾಗುತ್ತಿದ್ದು, ಸದರಿ ಪತ್ರದಲ್ಲಿನ ಸೂಚನೆಗಳನ್ವಯ ಈ ವರ್ಷವೂ ನವೆಂಬರ್ 27, ರಂದು "ಸಂವಿಧಾನ ದಿನ" ವನ್ನು ಆಚರಿಸಲು ಕ್ರಮ ಕೈಗೊಳ್ಳುವಂತೆ ನಿಮ್ಮನ್ನು ಕೋರಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

25/11/17

25/11/2017
4.00 PM.

ತಮ್ಮ ವಿಶ್ವಾಸಿ,

(ಕೆ.ಎಸ್.ರೋಹಿಣಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಆಸುಇ (ರಾಜಕೀಯ)

सत्यमेव जयते

# ಭಾರತದ ಸಂವಿಧಾನ

## ಪ್ರಸ್ತಾವನೆ

ಭಾರತದ ಜನಗಳಾದ ನಾವು ಭಾರತವನ್ನು ಒಂದು ಸಾರ್ವಭೌಮ ಸಮಾಜವಾದೀ ಸರ್ವಧರ್ಮ ಸಮಭಾವದ ಪ್ರಜಾಸತ್ತಾತ್ಮಕ ಗಣರಾಜ್ಯವಾಗಿ ರಚಿಸಲು ಮತ್ತು ಅದರ ಸಮಸ್ತ ನಾಗರಿಕರಿಗೆ:

ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯ;

ವಿಚಾರ, ಅಭಿವ್ಯಕ್ತಿ, ವಿಶ್ವಾಸ, ಧರ್ಮಶ್ರದ್ಧೆ ಮತ್ತು ಉಪಾಸನಾ ಸ್ವಾತಂತ್ರ್ಯ;

ಸ್ಥಾನಮಾನ ಹಾಗೂ ಅವಕಾಶ ಸಮಾನತೆ

ದೊರೆಯುವಂತೆ ಮಾಡಲು ಮತ್ತು ವ್ಯಕ್ತಿ ಗೌರವವನ್ನು ರಾಷ್ಟ್ರದ ಏಕತೆಯನ್ನು ಹಾಗೂ ಅಖಂಡತೆಯನ್ನು ಸುನಿಶ್ಚಿತಗೊಳಿಸಿ ಅವರಲ್ಲಿ ಭ್ರಾತೃಭಾವನೆಯನ್ನು ವೃದ್ಧಿಗೊಳಿಸಲು ಶ್ರದ್ಧಾಪೂರ್ವಕ ಸಂಕಲ್ಪ ಮಾಡಿದವರಾಗಿ;

ನಮ್ಮ ಸಂವಿಧಾನ ಸಭೆಯಲ್ಲಿ 1949ನೆಯ ಇಸವಿ ನವೆಂಬರ್ ತಿಂಗಳ ಇಪ್ಪತ್ತಾರನೆಯ ತಾರೀಖಾದ ಈ ದಿವಸ ಈ ಮೂಲಕ ಈ ಸಂವಿಧಾನವನ್ನು ಅಂಗೀಕರಿಸಿ, ಅಧಿನಿಯಮಿಸಿ ಅರ್ಪಿಸಿಕೊಂಡಿದ್ದೇವೆ.